ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ

ಮಾಹಿತಿ ಹಕ್ಕು ಅಧಿನಿಯಮ – 2005, ನಿಯಮ4(1)(a) ಹಾಗೂ 4(1)(b) (i) ರಿಂದ (xvii) ವರೆಗೆ

(ಡಿಸೆಂಬರ್ – 2025 ಅಂತ್ಯಗೊಳ್ಳುವ ತಿಂಗಳಿಗಾಗಿ ನವೀಕರಿಸಲಾಗಿದೆ)

<u>ಅಧಿಸೂಚನೆ</u>

ಮಾಹಿತಿ ಹಕ್ಕು ಅಧಿನಿಯಮ – 2005, ನಿಯಮ 4(1)(a) ಹಾಗೂ 4(1)(b) (i) ರಿಂದ (xvii) ವರೆಗೆ ಅನ್ವಯವಾಗುವಂತೆ, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯಕ್ಕೆ ಸಂಬಂಧಿಸಿದ ಮಾಹಿತಿಯನ್ನು ಡಿಸೆಂಬರ್– 2025 ಅಂತ್ಯಗೊಳ್ಳುವ ತಿಂಗಳಿಗಾಗಿ ನವೀಕರಿಸಿ, ಅನುಬಂಧ – 1 ಮತ್ತು 2 ರಲ್ಲಿ ಪ್ರಕಟಿಸಲಾಗಿದೆ.

Sd-/

(ಸುಬ್ರಮಣ್ಯ ಜೆ.ಎನ್.)
ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು,
ಮಂಡ್ಯ

ಮಾಹಿತಿ ಹಕ್ಕು ಅಧಿನಿಯಮ – 2005

ನಿಯಮ4(1)(a) ರ ಅನ್ವಯ ಮಾಹಿತಿ

ಕ್ರಮ ಸಂ ಖ್ಯೆ	ಸಾರ್ವಜನಿಕ ಪ್ರಾಧಿಕಾರದ ಹೆಸರು	ವೆಬ್‌ಸೈಟ್‌ನಲ್ಲಿ 4(1)(a) ಮಾಹಿತಿಯನ್ನು ಪ್ರಕಟಿಸಿದ ದಿನಾಂಕ	ವೆಬ್‌ಸೈಟ್‌ನಲ್ಲಿ 4(1)(a) ಮಾಹಿತಿಯ ನಂತರದ ನವೀಕರಣ ದಿನಾಂಕ	ವೆಬ್‌ಸೈಟ್ ವಿಳಾಸ	ಟಿಪ್ಪ ಣಿ
1	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ	02.06.2023	19.12.2025	https://mandya.dcourts.gov.in	—

ಮಾಹಿತಿ ಹಕ್ಕು ಅಧಿನಿಯಮ – 2005: ನಿಯಮ 4(1)(b) ರ ಅನ್ವಯ ಮಾಹಿತಿ

ಕ್ರಮ ಸಂ ಖ್ಯೆ	ಕಚೇರಿ / ಆಡಳಿತ ಘಟಕದ ಹೆಸರು	ಸಾರ್ವಜನಿಕ ಮಾಹಿತಿ ಅಧಿಕಾರಿಯ ಹುದ್ದೆ / ಹೆಸರು	ಕಚೇರಿ / ನಿವಾಸದ ದೂರವಾಣಿ	ಇ-ಮೇಲ್ ವಿಳಾಸ	ಟಿಪ್ಪ ಣಿ
1	ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯ, ಮಂಡ್ಯ	ಟಿ.ಎನ್. ಶಿವಕುಮಾರ್, ಮುಖ್ಯ ಆಡಳಿತಾಧಿಕಾರಿಗಳು, ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ.	08232-224124	pdjmdy2024@gmail.com	—

ಮೇಲ್ಮನವಿ ಪ್ರಾಧಿಕಾರ (Appellate Authority)

ಕ್ರಮ ಸಂ ಖ್ಯೆ	ಕಚೇರಿ / ಆಡಳಿತ ಘಟಕದ ಹೆಸರು	ಸಾರ್ವಜನಿಕ ಮಾಹಿತಿ ಅಧಿಕಾರಿಯ ಹುದ್ದೆ / ಹೆಸರು	ಕಚೇರಿ / ನಿವಾಸದ ದೂರವಾಣಿ	ಇ-ಮೇಲ್ ವಿಳಾಸ	ಟಿಪ್ಪ ಣಿ
1	ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯ, ಮಂಡ್ಯ	ಶ್ರೀ ಸುಬ್ರಮಣ್ಯ ಜೆ.ಎನ್., ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮಂಡ್ಯ	08232-224124	pdjmdy2024@gmail.com	—

ನ್ಯಾ.ಆ.ಮೇ.

Sd-/

(ಟಿ.ಎನ್. ಶಿವಕುಮಾರ್)
ಸಾರ್ವಜನಿಕ ಮಾಹಿತಿ ಅಧಿಕಾರಿ ಹಾಗೂ ಮುಖ್ಯ ಆಡಳಿತಾಧಿಕಾರಿ,
ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ
ಅಧಿಸೂಚನೆ- ದಿನಾಂಕಃ 24.08.2023

ಮಾಹಿತಿ ಹಕ್ಕು ಅಧಿನಿಯಮ 2005 (ಭಾರತ ಸರ್ಕಾರ ಕಾಯ್ದೆ ಸಂಖ್ಯೆಃ22-25) ಅಡಿಯಲ್ಲಿಯ ಕಲಂ.4(1)(b) ಅಡಿಯಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ ಬಗ್ಗೆ ಸಂಬಂಧಿಸಿದ ಮಾಹಿತಿಯನ್ನು ಈ ಕೆಳಗಿನಂತೆ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಕೈಪಿಡಿ 1: ಸಂಸ್ಥೆಯ ವಿವರಗಳು ಮತ್ತು ಕರ್ತವ್ಯ ಹಾಗೂ ವಿಧಿಗಳು	ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯ. ಕಾರ್ಯ ಮತ್ತು ಕರ್ತವ್ಯ-ನ್ಯಾಯಾಂಗ ಇಲಾಖೆಯ ಅಧೀನ ನ್ಯಾಯಾಲಯಗಳ ಆಡಳಿತಗಳು.
ಕೈಪಿಡಿ 2: ಸಂಸ್ಥೆಯ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದ ಅಧಿಕಾರಿ ಮತ್ತು ವಿಧಿಗಳ ವಿವರ	ವಿವರಗಳು ಅನುಬಂಧ-1 ರಲ್ಲಿದೆ.
ಕೈಪಿಡಿ 3: ನಿರ್ಣಯ ತೆಗೆದುಕೊಳ್ಳುವಲ್ಲಿ ಪಾಲಿಸಬೇಕಾದ ವಿಧಿ ವಿಧಾನಗಳ ಮತ್ತು ಪರಿವೀಕ್ಷಣೆ ಮತ್ತು ಜವಾಬ್ದಾರಿ ವಿವರಗಳು	ವಿವಿಧ ವಿಭಾಗಗಳಲ್ಲಿ ಅಥವಾ ಶಾಖೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ವಿಷಯ ನಿರ್ವಾಹಕರು ಮುಖ್ಯವಾಗಿ ಆಡಳಿತ ವಿಷಯಕ್ಕೆ ಸಂಬಂಧಪಟ್ಟಂತೆ ಪ್ರಸ್ತಾವನೆಗಳನ್ನು ಸ್ವೀಕರಿಸಿದಾಗ ಸದರಿ ಕಾರ್ಯಗತಗೊಳಿಸುವ ಬಗ್ಗೆ ಒಂದು ಕಡತವನ್ನು ತೆರೆದು, ಸದರಿ ಪ್ರಸ್ತಾವನೆಯನ್ನು ಸಂಬಂಧಪಟ್ಟ ಕಡತದಲ್ಲಿ ನಿವೇದನೆಯನ್ನು ಸಲ್ಲಿಸುವುದು. ನಂತರ ಸಂಬಂಧಪಟ್ಟ ವಿಭಾಗ/ ಶಾಖೆಯಲ್ಲಿ ಶಿರಸ್ತೇದಾರರು ಸದರಿ ಪ್ರಸ್ತಾವನೆ/ ನಿವೇದನೆಯನ್ನು ಪರಿಶೀಲಿಸಿ ಮುಖ್ಯ ಆಡಳಿತಾಧಿಕಾರಿಯವರ ಸಮಕ್ಷಮ ಮಂಡಿಸುವುದು ಮುಖ್ಯ ಆಡಳಿತಾಧಿಕಾರಿಯವರು ಸದರಿ ಪ್ರಸ್ತಾವನೆ/ ನಿವೇದನೆಯನ್ನು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮ, ಸುತ್ತೋಲೆ ಹಾಗೂ ಮಾನ್ಯ ಉಚ್ಚ ನ್ಯಾಯಾಲಯದ ಮಾರ್ಗಸೂಚಿಗಳ ಅನ್ವಯ ಪರಿಶೀಲಿಸಿ ಪ್ರಧಾನ ಜಿಲ್ಲಾ ನ್ಯಾಯಾಧೀಶರುಗಳಿಗೆ ಸಲ್ಲಿಸುವರು. ಪ್ರಧಾನ ಜಿಲ್ಲಾ ನ್ಯಾಯಾಧೀಶರು/ ಪೀಠಾಸೀನಾಧಿಕಾರಿಗಳು ಯಾವ ರೀತಿಯ ಕ್ರಮ ಕೈಗೊಳ್ಳಬೇಕೆಂದು ತಮಗೆ ಪ್ರದತ್ತವಾದ ಅಧಿಕಾರದ ಅಡಿಯಲ್ಲಿ ಸದರಿ ಕಡತವನ್ನು ಅಗತ್ಯವಿದ್ದಲ್ಲಿ ಮಾನ್ಯ ಉಚ್ಚ ನ್ಯಾಯಾಲಯಕ್ಕೆ ಅಂತಿಮ ತೀರ್ಮಾನ/ ಸೂಕ್ತ ಮಾರ್ಗದರ್ಶನಕ್ಕಾಗಿ ಕಳುಹಿಸುವರು.
ಕೈಪಿಡಿ 4: ಕರ್ತವ್ಯಗಳ ನಿರ್ವಹಣೆಯಲ್ಲಿ ಪಾಲಿಸಬೇಕಾದ ಸೂತ್ರಗಳು	ವಿಷಯ ಪ್ರಸ್ತಾವನೆ/ ನಿವೇದನೆಯ ತುರ್ತನ್ನು ಅವಲಂಬಿಸಿ ಬೇಡಿಕೆಯನ್ನು ಆದ್ಯತೆಯ ಮೇರೆಗೆ ನಿರ್ವಹಿಸಲಾಗುವುದು.

ಕೈಪಿಡಿ 5: ಇಲಾಖೆಯ ಅಧೀನದಲ್ಲಿರುವ ಸಿಬ್ಬಂಧಿ ಉಪಯೋಗಿಸುತ್ತಿರುವ ನಿಯಮಗಳು,ಸೂಚನೆಗಳು, ದಾಖಲೆಗಳು, ಕೈಪಿಡಿಗಳ ವಿವರ ಮತ್ತು ಕಛೇರಿ ಕೈಪಿಡಿ ನಿಯಮಗಳು.	ವಿವರ ಅನುಬಂಧ - 2ರಲ್ಲಿವೆ
ಕೈಪಿಡಿ 6: ಇಲಾಖೆಯ ಅಧೀನದಲ್ಲಿ ಪ್ರದತ್ತವಾದ ಹಾಗೂ ಮುಗಿಸಬೇಕಾಗಿರುವ ವಿವಿಧ ದಾಖಲೆಗಳು	ದಾಖಲಿಸಿದ ಕೇಸುಗಳು ಹಾಗೂ ಅವುಗಳಿಗೆ ಸಂಬಂಧಿಸಿದ ವಹಿಗಳು.
ಕೈಪಿಡಿ 7: ಇಲಾಖೆಯಲ್ಲಿರುವ ನೀತಿ ನಿಯಮಗಳನ್ನು ಅಥವಾ ಆಡಳಿತವನ್ನು ನಡೆಸುವಲ್ಲಿ ಪಡೆಯುವ ಸಲಹಾ ಸೂತ್ರಗಳ ಅಥವಾ ಸಾರ್ವಜನಿಕ ಸದಸ್ಯರುಗಳಿಂದ ಸಲಹೆ ಪಡೆಯುವ ವ್ಯವಸ್ಥೆ ಮತ್ತು ವಿವರ	ವಿಲೇಖನಾಧಿಕಾರಿಗಳು ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಸಲಹೆ ಹಾಗೂ ಸೂಚನಾದೇಶಗಳನ್ನು ಪಡೆಯಲಾಗುತ್ತದೆ.
ಕೈಪಿಡಿ 8: ಇಲಾಖೆಯಲ್ಲಿರುವ ನಿಗಮ ಪರಿಷತ್ತು ಸಮಿತಿ ಮತ್ತು ಇತರ ಸಂಸ್ಥೆಗಳ ವಿವರ ಮತ್ತು ಅದರ ಉದ್ದೇಶ ಹಾಗೂ ಈ ಸಂಸ್ಥೆಗಳ ಸಭೆಗಳು ಮತ್ತು ಸಭೆಯ ನಡುವಳಿಗಳು ಲಭ್ಯವಿರುವ ಬಗ್ಗೆ	ಅಂಥಹ ಶಾಸನಾತ್ಮಕ ಸಮಿತಿಗಳಿರುವುದಿಲ್ಲ. ಸಾರ್ವಜನಿಕರಿಂದ ನಡಾವಳಿಗಳ ಮಾಹಿತಿಯನ್ನು ಸ್ವೀಕರಿಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.
ಕೈಪಿಡಿ 9: ಇಲಾಖೆಯ ಅಧಿಕಾರ ಮತ್ತು ಸಿಬ್ಬಂದಿ ವರ್ಗದ ನಿರ್ದೇಶಿಕೆ	ಅಧಿಕಾರಿಗಳ ಹಾಗೂ ನೌಕರರ ಯಾದಿ(List) ಜಿಲ್ಲಾ ನ್ಯಾಯಾಲಯ ಆಡಳಿತ ವಿಭಾಗದಲ್ಲಿದೆ. ನೌಕರರ ವಾಸ್ತವ್ಯದ ವಿಳಾಸವು ಪದೇ ಪದೇ ಬದಲಾಗುತ್ತಿರುವುದರಿಂದ ಜಿಲ್ಲಾ ನ್ಯಾಯಾಲಯದ ಆಡಳಿತ ವಿಭಾಗವು ಸದರಿ ಬದಲಾವಣೆಗಳನ್ನು ಪರಿಗಣಿಸಲು ಸೂಚಿಸಲಾಗುವುದು.
ಕೈಪಿಡಿ 10: ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದ ತಿಂಗಳ ಪ್ರತಿಫಲ ಮತ್ತು ಅದನ್ನು ನೀಡುವ ಸೂತ್ರಗಳು.	ವಾರ್ಷಿಕ ಬಡ್ತಿ, ತುಟ್ಟಿ ಭತ್ಯೆ ದರದಲ್ಲಿನ ಹೆಚ್ಚಳದಿಂದಾಗಿ ಒಬ್ಬ ಅಥವಾ ಇತರ ನೌಕರರಿಗೆ ಅಧಕಾರಿಗಳ ಮಾಸಿಕ ವೇತನದಲ್ಲಿ ಬದಲಾವಣೆಗಳಾಗುತ್ತವೆ. ಪ್ರತಿ ತಿಂಗಳು ನಗದು ವಿಭಾಗದ ಸಂಬಂಧಪಟ್ಟ ಶಿರಸ್ತೇದಾರರು/ ಗುಮಾಸ್ತರು ವೇತನ ಬಿಲ್ಲಗಳನ್ನು ತಯಾರು ಮಾಡುವ ಸಂದರ್ಭದಲ್ಲಿ ಎಲ್ಲಾ ನೌಕರರ ಒಟ್ಟು ವೇತನ, ಕಡಿತಗಳು ಮತ್ತು ನಿವ್ವಳ ವೇತನ ಅವುಗಳನ್ನು ಪಟ್ಟಿಯಲ್ಲಿ ನಮೂದಿಸುತ್ತಾರೆ.
ಕೈಪಿಡಿ 11: ಇಲಾಖೆಯಲ್ಲಿರುವ ವಲಯ ವಿಭಾಗಗಳಿಗೆ ನೀಡುತ್ತಿರುವ ಆಯವ್ಯಯ	ಸರ್ಕಾರವು ಆರ್ಥಿಕ ಹಂಚಿಕೆಯ ವಿಧಿಯನ್ನು ಇಲಾಖಾ ಮುಖ್ಯಸ್ಥರಿಗೆ ಬಿಡುಗಡೆ ಮಾಡವುದು.

ಕೈಪಿಡಿ 12: ಇಲಾಖೆಯಲ್ಲಿ ಸಹಾಯಧನ ನೀಡುವ ಕಾರ್ಯಕ್ರಮಗಳ ನಿರ್ವಾಹಣಾ ವಿವರ ಮತ್ತು ಅದಕ್ಕೆ ಒದಗಿಸಲಾದ ಅನುದಾನ ಹಾಗೂ ಫಲಾನುಭವಿಗಳ ವಿವರಗಳು	ಅಂತಹ ರೀತಿಯ ಕಾರ್ಯಕ್ರಮಗಳು ಇರುವುದಿಲ್ಲ.
ಕೈಪಿಡಿ 13: ಇಲಾಖೆಯಲ್ಲಿ ನೀಡುತ್ತಿರುವ ಪರವಾನಗಿ ಅಥವಾ ಅಧಿಕಾರ ಪತ್ರಗಳ ವಿವರ ಮತ್ತು ರಿಯಾಯಿತಿ ಪಡೆಯುವವರ ವಿವರ	ಅಂತಹ ರೀತಿಯ ಕಾರ್ಯಕ್ರಮಗಳು ಇರುವುದಿಲ್ಲ.
ಕೈಪಿಡಿಃ 14: ಇಲಾಖೆಯು ಹೊಂದಿರುವ /ಲಭ್ಯವಿರುವ ವಿದ್ಯುನ್ಮಾನ ರೂಪಕ್ಕೆ ಪರವರ್ತಿಸಿರುವ ಮಾಹಿತಿಗೆ ಸಂಬಂಧಿಸಿದ ವಿವರ	1. ಸಾಧ್ಯವಾದ ಮಟ್ಟಿಗೆ ಕೇಸನ್ನು ದಾಖಲಿಸಿದ ನಂತರ ವಿಲೇಯಾಗುವವರೆಗೆ ಪ್ರತೀ ಹಂತದ ವಿವರಗಳನ್ನು ಕಂಪ್ಯೂಟರ್ ನಲ್ಲಿ ಅಳವಡಿಸಿ ಪ್ರಚುರಪಡಿಸಲಾಗುವುದು. ಅದು ಒಂದು ವೇಳೆ ಸಾಧ್ಯವಾಗದಿದ್ದಲ್ಲಿ ಸಂಬಂಧಿಸಿದ ರಿಜಿಸ್ಟರ್ ಗಳಲ್ಲಿ ನಮೂದಿಸಲಾಗುವುದು. 2. ಜಿಲ್ಲಾ ನ್ಯಾಯಾಲಯದಲ್ಲಿರುವ ಎಲ್ಲಾ ಸಿಬ್ಬಂದಿಗಳ ಸಂಬಳದ ವಿವರಗಳು ಜೆರಾಕ್ಸ್ ಅಥವಾ ಟೈಪ್ ಮುಖಾಂತರ ದೃಢೀಕೃತ ನಕಲುಗಳನ್ನು ಒದಗಿಸಲ್ಪಡುವುದು.
ಕೈಪಿಡಿ 15: ಇಲಾಖೆಯಲ್ಲಿ ಸಾರ್ವಜನಿಕರಿಗೆ ಮಾಹಿತಿ ಪಡೆಯಲು ಲಭ್ಯವಿರುವ ಸವಲತ್ತುಗಳು ಹಾಗೂ ಗ್ರಂಥಾಲಯ ಅಥವಾ ವಾಚನಾಲಯಗಳು ಇದ್ದಲ್ಲಿ ಅದರ ವಿವರಗಳು	ಗ್ರಂಥಾಲಯವು ಮಾನ್ಯ ನ್ಯಾಯಾಧೀಶರುಗಳಿಗೆ ಹಾಗೂ ನ್ಯಾಯಾಲಯದ ಸಿಬ್ಬಂದಿಗಳ ಉಪಯೋಗಕ್ಕೆ ಲಭ್ಯವಿದ್ದು ಸಾರ್ವಜನಿಕರ ಉಪಯೋಗಕ್ಕಾಗಿ ಇರುವುದಿಲ್ಲ.
ಕೈಪಿಡಿ 16: ಇಲಾಖೆಯಲ್ಲಿರುವ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು ಪದನಾಮ ಮತ್ತು ಇತರ ವಿವರಗಳು	ಶ್ರೀ. ಟಿ. ಎನ್. ಶಿವಕುಮಾರ್ ಮುಖ್ಯ ಆಡಳಿತಾಧಿಕಾರಿಗಳು ಹಾಗೂ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ, ದೂರವಾಣಿ ಸಂಖ್ಯೆಃ **08232 224124** ಇ-ಮೇಲ್ ಐಡಿಃ pdjmdy2024@gmail.com
ಕೈಪಿಡಿ 17: ಇತರ ವಿವರಗಳು	ಯಾವುದೂ ಇಲ್ಲ

ನ್ಯಾಯಾಧೀಶರ ಆದೇಶದ ಮೇರೆಗೆ

Sd-/

(ಟಿ.ಎನ್. ಶಿವಕುಮಾರ್)

ಮುಖ್ಯ ಆಡಳಿತಾಧಿಕಾರಿಗಳು,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,

ಮಂಡ್ಯ.

ಅನುಬಂಧ – 1

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಡ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ ನೌಕರರ ಕರ್ತವ್ಯಗಳು

ಮುಖ್ಯ ಆಡಳಿತಾಧಿಕಾರಿಗಳು	ಗೌರವಾನ್ವಿತ ಉಚ್ಚ ನ್ಯಾಯಾಲಯದ ಮತ್ತು ಮಾನ್ಯ ಜಿಲ್ಲಾ ನ್ಯಾಯಾಧೀಶರ ಸಲಹೆ/ ನಿರ್ದೇಶನಗಳ ಮೇರೆಗೆ ಜಿಲ್ಲಾ ಆಡಳಿತದ ಮುಖ್ಯಸ್ಥರಾಗಿ ಕೆಲಸ ನಿರ್ವಹಿಸುತ್ತಾರೆ.
ತಂತ್ರಾಂಶ ತಂತ್ರಜ್ಞರು	ಆಡಳಿತ ವ್ಯವಸ್ಥೆ ಮತ್ತು ನಿರ್ವಹಣೆಯಲ್ಲಿ ಗೌರವಾನ್ವಿತ ಉಚ್ಚ ನ್ಯಾಯಾಲಯ/ ಜಿಲ್ಲಾ ನ್ಯಾಯಾಲಯದ ನಿರ್ದೇಶನದಂತೆ ವಿವಿಧ ಕರ್ತವ್ಯಗಳನ್ನು ನಿರ್ವಹಿಸುವುದು ಮತ್ತು ಅಗತ್ಯವಿರುವಾಗ ಸಹಾಯ ಮಾಡುವುದು.
ಕೋರ್ಟ್ ಮ್ಯಾನೇಜರ್	ಮೂಲಭೂತ ಸೌಕರ್ಯ ಮತ್ತು ಕಟ್ಟಡಗಳ ನಿರ್ವಹಣೆ, ಮಾಹಿತಿ ನಿರ್ವಹಣೆ ಮತ್ತು ವರದಿ ಮಾಡುವಿಕೆ, ಲೋಯರ್ ಕೊರ್ಟ್ಸ್ ಇನ್ಸ್ಪೆಕ್ಷನ್, ಐಟಿ ಸಿಸ್ಟಮ್ಸ್ ಮ್ಯಾನೇಜ್ಮೆಂಟ್, ಹೆಚ್ ಆರ್ ಮ್ಯಾನೇಜ್ಮೆಂಟ್, ಸಭೆಗಳು ಮತ್ತು ವಿವಿಧ ಕಾರ್ಯಕ್ರಮಗಳನ್ನು ನಡೆಸುವುದು, ಮೇಲ್ವಿಚಾರಣೆ, ಸೌಲಭ್ಯಗಳ ನಿರ್ವಹಣೆ, ಪ್ರೋಟೊಕಾಲ್ ಸೇವೆಗಳು, ಕುಂದುಕೊರತೆಗಳ ನಿರ್ವಹಣೆ, ಸಾರ್ವಜನಿಕ ಮಾಹಿತಿ ಸಹಕಾರ ಕರ್ತವ್ಯಗಳನ್ನು ನಿರ್ವಹಿಸುವುದು.
ಸೀನಿಯರ್ ಶಿರಸ್ತೇದಾರರು/ ಶಿರಸ್ತೇದಾರರು	ಆಯಾ ವಿಭಾಗ/ ಶಾಖೆಯ ಸುಂಪೂರ್ಣ ಮೇಲ್ವಿಚಾರಣೆಯ ಜವಾಬ್ದಾರಿಯನ್ನು ನಿರ್ವಹಿಸುವುದು ಮತ್ತು ನ್ಯಾಯಾಲಯಗಳ ದೈನಂದಿನ ಕೆಲಸಕಾರ್ಯಗಳಲ್ಲಿ ನಿಗದಿತ ನಿಯಮಾವಳಿಗಳ ಅನುಸಾರ ಕರ್ತವ್ಯ ನಿರ್ವಹಿಸುವುದು.
ಶೀಘ್ರಲಿಪಿಗಾರರು	ಮಾನ್ಯ ನ್ಯಾಯಾಧೀಶರು ತಮಗೆ ವಹಿಸಿಕೊಟ್ಟ ಬೆರಳಚ್ಚು ಮತ್ತು ಶೀಘ್ರಲಿಪಿ ಕೆಲಸವನ್ನು ಟೈಪ್ ಮಾಡುವ ಮುಖಾಂತರ ಅಥವಾ ಗಣಕಯಂತ್ರದಲ್ಲಿ ನಿರ್ವಹಿಸುವುದು.
ಪ್ರಥಮ ದರ್ಜೆ ಸಹಾಯಕರು/ ದ್ವಿತೀಯ ದರ್ಜೆ ಸಹಾಯಕರು	ತಮಗೆ ವಹಿಸಿಕೊಟ್ಟ ಕಡತಗಳಿಗೆ ಸಂಬಂಧಪಟ್ಟಂತಹ ವಿಷಯ ನಿರ್ವಹಣೆ, ಡಿಕ್ರಿ ತಯಾರಿಸುವುದು ಮತ್ತು ಗ್ರಂಥ ಭಂಡಾರ ಸಹಾಯಕನಾಗಿ ಕರ್ತವ್ಯ ನಿರ್ವಹಿಸುವುದು. ನಕಲು ಪ್ರತಿಗಳನ್ನು ತಯಾರಿಸುವುದು, ಕಡತಗಳಿಗೆ ಸಂಬಂಧಪಟ್ಟ ವಹಿಗಳನ್ನು ನಿರ್ವಹಿಸುವುದು. ನ್ಯಾಯ ಪೀಠದ ಸಹಾಯಕನಾಗಿ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಪ್ರಕರಣಗಳ ಪಟ್ಟಿಯನ್ನು ಸಿದ್ಧಪಡಿಸುವು.

ಡೇಟಾ ಎಂಟ್ರಿ ಆಪರೇಟರ್ ಮತ್ತು ಬೆರಳಚ್ಚು ನಕಲುಗಾರರು	ಬೆರಳಚ್ಚು ಯಂತ್ರ/ಗಣಕ ಯಂತ್ರಗಳ ಮುಖಾಂತರ ಬೆರಳಚ್ಚು ಕೆಲಸ ನಿರ್ವಹಿಸುವುದು. ತಮಗೆ ವಹಿಸಿಕೊಟ್ಟ ಯಾವುದೆ ವಿಭಾಗಕ್ಕೆ ಸಂಬಂಧಪಟ್ಟ ಲಿಪಿಕ ಕರ್ತವ್ಯವನ್ನು ಸಹ ನಿರ್ವಹಿಸುವುದು.
ಅಮೀನರು	ಮಾನ್ಯ ನ್ಯಾಯಾಲಯಗಳು ಹೊರಡಿಸಿದ ವಾರಂಟ್, ತಡೆಯಾಜ್ಞೆ ಸ್ವಾಧೀನ ಅಧಿಪತ್ರಗಳನ್ನು ಜಾರಿಗೊಳಿಸುವುದು. ಗಣ್ಯ ವ್ಯಕ್ತಿಗಳ ಭೇಟಿ ಸಮಯದಲ್ಲಿ ಶಿಷ್ಟಾಚಾರ ಕೆಲಸ ನಿರ್ವಹಿಸುವುದು ಹಾಗೂ ಇತರೆ ಯಾವುದೇ ಕಛೇರಿಯ ಕೆಲಸಗಳನ್ನು ನಿರ್ವಹಿಸುವುದು.
ಆದೇಶಿಕ ಜಾರಿಕಾರರು	ನ್ಯಾಯಾಲಯಗಳು ಹೊರಡಿಸಿದ ಸೂಚನಾ/ ತಿಳುವಳಿಕೆ ಪತ್ರ - ಕರೆ (Notice/ Summons) ಗಳನ್ನು ಜಾರಿಗೊಳಿಸುವುದು. ಗಣ್ಯ ವ್ಯಕ್ತಿಗಳ ಭೇಟಿ ಸಮಯದಲ್ಲಿ ಶಿಷ್ಟಾಚಾರ ಕೆಲಸ ನಿರ್ವಹಿಸುವುದು ಹಾಗೂ ಇತರೆ ಯಾವುದೇ ಕಛೇರಿಯ ಕೆಲಸಗಳನ್ನು ನಿರ್ವಹಿಸುವುದು.
ಅಟೆಂಡರ್	ನ್ಯಾಯಾಧೀಶರ ಕೊಠಡಿ ಮತ್ತು ನ್ಯಾಯಾಲಯ/ ಕಛೇರಿಗಳನ್ನು ಕ್ರಮಬ್ಧವಾಗಿ ಸ್ವಚ್ಛವಾಗಿಡುವುದು ಹಾಗೂ ನ್ಯಾಯಾಲಯದ ಕಲಾಪ ನಡೆದ ಸಂದರ್ಭದಲ್ಲಿ ಕೆಲಸಗಳಿಗೆ ಸಹಕರಿಸುವುದು ಹಾಗೂ ಕಛೇರಿಯ ಇನ್ನಿತರೆ ಯಾವುದೇ ಕೆಲಸಗಳನ್ನು ನಿರ್ವಹಿಸುವುದು. ಗಣ್ಯ ವ್ಯಕ್ತಿಗಳ ಭೇಟಿ ಸಮಯದಲ್ಲಿ ಶಿಷ್ಟಾಚಾರ ಕೆಲಸ ನಿರ್ವಹಿಸುವುದು.
ಜವಾನ	ತೆರೆದ ನ್ಯಾಯಾಲಯ ಹಾಗೂ ನ್ಯಾಯಾಧೀಶರ ಕೊಠಡಿಯಲ್ಲಿನ ಕರ್ತವ್ಯ ನಿರ್ವಹಿಸುವುದು ಕಛೇರಿಯನ್ನು ಸ್ವಚ್ಛವಾಗಿ ಕಸ ರಹಿತವಾಗಿಡುವುದು. ಕಡತ-ಟಪಾಲುಗಳನ್ನು ಒಂದು ವಿಭಾಗದಿಂದ ಇನ್ನೊಂದು ವಿಭಾಗಕ್ಕೆ ನೀಡುವುದು. ತಮಗೆ ವಹಿಸಿಕೊಟ್ಟ ಯಾವುದೇ ಕೆಲಸ ನಿರ್ವಹಿಸುವುದು. ರಾತ್ರಿ ಪಹರೆಯ ಕರ್ತವ್ಯ ನಿರ್ವಹಿಸುವುದು. ಗಣ್ಯ ವ್ಯಕ್ತಿಗಳ ಭೇಟಿ ಸಮಯದಲ್ಲಿ ಶಿಷ್ಟಾಚಾರ ಕೆಲಸ ನಿರ್ವಹಿಸುವುದು.

ಜಿಲ್ಲಾ ನ್ಯಾಯಾಧೀಶರ ಆದೇಶದ ಮೇರೆಗೆ

Sd-/

(ಟಿ.ಎನ್. ಶಿವಕುಮಾರ್)

ಮುಖ್ಯ ಆಡಳಿತಾಧಿಕಾರಿಗಳು,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,

ಮಂಡ್ಯ.

ಅನುಬಂಧ -2

ತಮ್ಮ ನಿಯಂತ್ರಣದಲ್ಲಿ ಹೊರಡಿಸುವ ಅಥವಾ ತಮ್ಮ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ನೌಕರರು ಬಳಸುವ ನಿಯಮಗಳು, ನಿಯಂತ್ರಣಗಳು, ನಿರ್ದೇಶನಗಳು, ಕೈಪಿಡಿ ಮತ್ತು ದಾಖಲೆಗಳು.

ಅ. ಕಾಯಿದೆಗಳುಃ

1. ಕರ್ನಾಟಕ ನ್ಯಾಯಾಲಯ ಶುಲ್ಕ ಮತ್ತು ದಾವೆಗಳು ಮೌಲ್ಯಮಾಪನ ಕಾಯಿದೆ 1958 ಮತ್ತು ನಿಯಮಗಳು 1960.
2. ಕರ್ನಾಟಕ ಸ್ಟ್ಯಾಂಪ್ ಕಾಯಿದೆ - 1957
3. ಕರ್ನಾಟಕ ದಿವಾಣಿ/ಸಿವಿಲ್ ವ್ಯವಹಾರಿಕ ನಿಯಮಗಳು - 1967
4. ಕರ್ನಾಟಕ ಫೌಜುದಾರಿಕೆ/ಕ್ರಿಮಿನಲ್ ವ್ಯವಹಾರಿಕ ನಿಯಮಗಳು - 1908p
5. ದಿವಾಣಿ ನ್ಯಾಯಾಲಯಗಳ ಕಾಯ್ದೆ

ಆ. ನಿಯಮಗಳುಃ

1. ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರ ಹುದ್ದೆಗಳು) ನೇಮಕಾತಿ ನಿಯಮಗಳು- 1982
2. ಕರ್ನಾಟಕ ನಾಗರಿಕ ಸೇವಾ ನಿಯಮಗಳು - 1957
3. ಅಧೀನ ನ್ಯಾಯಾಲಯಗಳ ದಿವಾಣಿ ಮತ್ತು ಫೌಜುದಾರಿಕೆ ಲೆಕ್ಕ ನಿಯಮಗಳು -1967
4. ಕರ್ನಾಟಕ ನಾಗರಿಕ ಸೇವೆ (ಸಿಸಿಎ) ನಿಯಮಗಳು- 1957
5. ಕರ್ನಾಟಕ ನಾಗರಿಕ ಸೇವೆ (ಖಾಯಂ ಪೂರ್ವ ತರಬೇತಿ) ನಿಯಮಗಳು -1977
6. ಕರ್ನಾಟಕ ನಾಗರಿಕ ಸೇವೆ (ಸಭ್ಯತೆ ವೇತನ ಮತ್ತು ವಿಶ್ರಾಂತಿ ವೇತನಗಳ ನಿಯಂತ್ರಣ) ನಿಯಮ - 1974
7. ಕರ್ನಾಟಕ ನಾಗರಿಕ ಸೇವೆ (ವೈದ್ಯಕೀಯ ಸಹಾಯಕ) ನಿಯಮಗಳು - 2000
8. ಸಾಮಾನ್ಯ ನೇಮಕಾತಿ ನಿಯಮ -1977
9. ಕರ್ನಾಟಕ ನಾಗರಿಕ ಸೇವೆ (ಬೆರಳಚ್ಚುಗಾರ ಮತ್ತು ಕಿರಿಯ ಸಹಾಯಕ – ದ್ವಿತೀಯ ದರ್ಜೆ ಸಹಾಯಕ ಹುದ್ದೆ
   ಬದಲಾವಣೆ) ನಿಯಮಗಳು - 1974
10. ಕರ್ನಾಟಕ ನಾಗರಿಕ ಸೇವೆ (ಕಾರ್ಯ ನಿರ್ವಹಣ ವರದಿ) ನಿಯಮಗಳು -2000
11. ಕರ್ನಾಟಕ ನಾಗರಿಕ ಸೇವೆ (ಜೇಷ್ಠತೆ) ನಿಯಮಗಳು -1957
12. ಕರ್ನಾಟಕ ನಾಗರಿಕ ಸೇವೆ (ಕಾಲನಿಯಮ ಬಡ್ತಿ ಯೋಜನೆ) ನಿಯಮಗಳು -1983
13. ಕರ್ನಾಟಕ ನಾಗರಿಕ ಸೇವೆ (ಹಿರಿಯ ವೇತನ ಶ್ರೇಣಿಗೆ ಸ್ವಯಂ ಚಾಲಿತ ವೇತನ ಬಡ್ತಿ) ನಿಯಮಗಳು - 1991
14. ಸ್ಥಗಿತ ವೇತನ ಬಡ್ತಿ ಮಂಜೂರು ನಿಯಮಗಳು - 1996
15. ಕರ್ನಾಟಕ ನಾಗರಿಕ ಸೇವೆ (ಕನ್ನಡ ಭಾಷಾ ಪರೀಕ್ಷೆ) ಕಾಯಿದೆ -1978
16. ವಕೀಲರ ಗುಮಾಸ್ತರ ನಿಯಮಗಳು -1960
17. ದಸ್ತಾವೇಜು ಬರಹಗಾರರ ನಿಯಮಗಳು -1966
18. ಪರಿಶಿಷ್ಟ ಜಾತಿ/ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳಿಗೆ ನೇಮಕಾತಿಯಲ್ಲಿ ಮೀಸಲಾತಿ ನಿಯಮಗಳು

ಇ. ನಿರ್ದೇಶನಗಳು ಕೈಪಿಡಿ ಇತ್ಯಾದಿಃ

1. ಕರ್ನಾಟಕ ಆರ್ಥಿಕ ಸಂಹಿತೆ
2. ಕರ್ನಾಟಕ ಖಜಾನೆ ಸಂಹಿತೆ
3. ಸಂಭವನೀಯ ವೆಚ್ಚಗಳ ಕೈಪಿಡಿ
4. ನ್ಯಾಯಿಕ ದಂಡ ಪ್ರಕ್ರಿಯಾ ಸಂಹಿತೆ
5. ದಿವಾಣಿ ಪ್ರಕ್ರಿಯಾ ಸಂಹಿತೆ
6. ಭಾರತೀಯ ದಂಡ ಸಂಹಿತೆ
7. ಆಡಳಿತಾತ್ಮಕ ಕೈಪಿಡಿ
8. ಮಾಜಿ ಸೈನಿಕರ ಮೀಸಲಾತಿ ನಿರ್ದೇಶನ
9. ಪರಿಶಿಷ್ಟ ಜಾತಿ, ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳಿಗೆ ರೋಸ್ಟರ್ ಪ್ರಕಾರ ಮೀಸಲಾತಿ ನಿರ್ದೇಶನಗಳು

ಅವರಣಲ್ಲಿರುವ ಮತ್ತು ಅಧೀನದಲ್ಲಿರುವ ದಾಸ್ತಾವೇಜುಗಳ ನಮೂನೆಗಳ ಪಟ್ಟಿ ಗ್ರೂಪ್ 'ಸಿ' ಮತ್ತು 'ಡಿ' ನೌಕರರ ಈ ಕೆಳಗೆ ನಮೂದಿಸಿದ ದಾಸ್ತಾವೇಜುಗಳುಃ

1) ಸೇವಾ ವಹಿಗಳು
2) ವಾರ್ಷಿಕ ಕಾರ್ಯನಿರ್ವಹಣಾ ವರದಿ
3) ಆಸ್ತಿ ಮತ್ತು ಹೊಣೆಗಾರಿಕಾ ವಿವರಣಾ ಪಟ್ಟಿ

ಜಿಲ್ಲಾ ನ್ಯಾಯಾಧೀಶರ ಆದೇಶದ ಮೇರೆಗೆ

Sd-/
(ಟಿ.ಎನ್. ಶಿವಕುಮಾರ್)
ಮುಖ್ಯ ಆಡಳಿತಾಧಿಕಾರಿಗಳು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಮಂಡ್ಯ.